Akashvani: Bangalore
National Bulletin In Kannada
29.01.2026 : 13.10hrs
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

29.01.2026 : 13.10hrs
********

**ಮುಖ್ಯಾಂಶಗಳು :**

1. ಲೋಕಸಭೆಯಲ್ಲಿಂದು ೨೦೨೫-೨೬ರ ಆರ್ಥಿಕ ಸಮೀಕ್ಷೆ ಮಂಡಿಸಿದ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್
2. ನವದೆಹಲಿಯಲ್ಲಿ ಇದೇ ಶನಿವಾರ ೨ನೇ ಭಾರತ-ಅರಬ್ ವಿದೇಶಾಂಗ ಸಚಿವರ ಸಭೆ
3. ಸಕಲ ಸರ್ಕಾರಿ ಗೌರವಗಳೊಂದಿಗೆ ಎನ್‌ಸಿಪಿ ನಾಯಕ ಅಜಿತ್ ಪವಾರ್ ಅವರ ಅಂತ್ಯಕ್ರಿಯೆ ; ವಿವಿಧ ಗಣ್ಯರಿಂದ ಅಂತಿಮ ನಮನ
4. ಡಬ್ಲ್ಯೂಪಿಎಲ್ ಟಿ-೨೦ ಕ್ರಿಕೆಟ್ ; ಇಂದಿನ ಪಂದ್ಯದಲ್ಲಿ ಆರ್‌ಸಿಬಿ-ಯುಪಿ ವಾರಿಯರ್ಸ್ ಮುಖಾಮುಖಿ

********

ಲೋಕಸಭೆಯಲ್ಲಿಂದು ೨೦೨೫-೨೬ರ ಆರ್ಥಿಕ ಸಮೀಕ್ಷೆಯ ಪ್ರತಿಯನ್ನು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿದರು.ಮುಖ್ಯ ಆರ್ಥಿಕ ಸಲಹೆಗಾರರ ಮಾರ್ಗದರ್ಶನದಲ್ಲಿ ಕೇಂದ್ರ ಹಣಕಾಸು ಸಚಿವಾಲಯದ ಆರ್ಥಿಕ ವ್ಯವಹಾರಗಳ ಇಲಾಖೆಯು ಈ ದಾಖಲೆಯನ್ನು ಸಿದ್ಧಪಡಿಸಿದೆ. ಆರ್ಥಿಕ ಸಮೀಕ್ಷೆಯು ದೇಶದ ಪ್ರಸ್ತುತ ಆರ್ಥಿಕ ಸ್ಥಿತಿ ಮತ್ತು ಭವಿಷ್ಯದ ದೃಷ್ಟಿಕೋನದ ಸಮಗ್ರ ವಿಮರ್ಶೆಯಾಗಿದೆ. ೨೦೨೬-೨೭ರ ಕೇಂದ್ರ ಬಜೆಟ್ ಅನ್ನು ಇದೇ ಭಾನುವಾರ ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಲಿದ್ದಾರೆ.

********

ದೇಶವು ಈಗ ದೀರ್ಘಕಾಲಿನ ಬಾಕಿಯಿರುವ ಸಮಸ್ಯೆಗಳನ್ನು ಮೀರಿ ಮುಂದುವರಿಯುತ್ತಿದೆ ಮತ್ತು ದೀರ್ಘಕಾಲಿನ ಪರಿಹಾರಗಳ ಹಾದಿಯಲ್ಲಿ ದೃಢವಾಗಿ ಹೆಜ್ಜೆ ಹಾಕುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ನವದೆಹಲಿಯ ಸಂಸತ್ ಭವನದ ಸಂಕೀರ್ಣದಲ್ಲಿ ಸುದ್ದಿಗಾರರನ್ನು ಉದ್ದೇಶಿಸಿ ಮಾತನಾಡಿದ ಅವರು, ೨೦೪೭ರ ವೇಳೆಗೆ ವಿಕಸಿತ ಭಾರತದ ಗುರಿಯನ್ನು ಸಾಧಿಸಲು ಮುಂದಿನ ೨೫ ವರ್ಷಗಳು ನಿರ್ಣಾಯಕವಾಗಿವೆ ಎಂದರು.

***ಧ್ವನಿ*** ಪ್ರಧಾನಿ ನರೇಂದ್ರ ಮೋದಿ

ಭಾರತ-ಐರೋಪ್ಯ ಒಕ್ಕೂಟ ಮುಕ್ತ ವ್ಯಾಪಾರ ಒಪ್ಪಂದ ಒಂದು ಪ್ರಮುಖ ಮೈಲುಗಲ್ಲಾಗಿದೆ. ಆತ್ಮವಿಶ್ವಾಸ, ಸ್ಪರ್ಧಾತ್ಮಕ ಮತ್ತು ಉತ್ಪಾದಕ ಭಾರತದ ದಿಕ್ಕಿನಲ್ಲಿ ಇದು ಪ್ರಮುಖ ಹೆಜ್ಜೆಯಾಗಿದೆ ಎಂದು ಹೇಳಿದರು.ಪ್ರಜಾಪ್ರಭುತ್ವ ದೇವಾಲಯವಾದ ಸಂಸತ್‌ನಲ್ಲಿ ಸಂಸದರು, ಜಾಗತಿಕ ಸಮುದಾಯಕ್ಕೆ ದೇಶದ ಸಾಮರ್ಥ್ಯ ಮತ್ತು ಪ್ರಜಾಪ್ರಭುತ್ವದ ಕಡೆಗೆ ಅದರ ಸಮರ್ಪಣೆಯ ಬಗ್ಗೆ ಸ್ಪಷ್ಟ ಸಂದೇಶ ಕಳುಹಿಸುವ ಅವಕಾಶ ಹೊಂದಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದರು.

********

ಪ್ರಧಾನಮಂತ್ರಿ ಆವಾಸ್ ಯೋಜನೆ ಆರಂಭವಾದಾಗಿನಿಂದ ಇದುವರೆಗೂ ನಗರ ಪ್ರದೇಶದಲ್ಲಿ ಒಂದು ಕೋಟಿ ೬೪ ಲಕ್ಷಕ್ಕೂ ಹೆಚ್ಚು ಮನೆಗಳನ್ನು ಮಂಜೂರು ಮಾಡಲಾಗಿದೆ ಎಂದು ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ರಾಜ್ಯ ಸಚಿವ ತೋಖನ್ ಸಾಹು ತಿಳಿಸಿದ್ದಾರೆ. ಲೋಕಸಭೆಯಲ್ಲಿಂದು ಪೂರಕ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, ಮಂಜೂರಾದ ಒಟ್ಟು ಮನೆಗಳಲ್ಲಿ ೯೮ಲಕ್ಕೂ ಹೆಚ್ಚು ಮನೆಗಳನ್ನು ಪೂರ್ಣಗೊಳಿಸಿದ್ದು, ಫಲಾನುಭವಿಗಳಿಗೆ ಹಸ್ತಾಂತರಿಸಲಾಗಿದೆ. ಎರಡು ಲಕ್ಷ ಕೋಟಿ ರೂಪಾಯಿಗಳ ಕೇಂದ್ರ ಸರ್ಕಾರದ ನೆರವಿನೊಂದಿಗೆ ಒಂದು ಕೋಟಿಗೂ ಹೆಚ್ಚು ಜನರು ಈ ಯೋಜನೆಯ ಪ್ರಯೋಜನ ಪಡೆದುಕೊಂಡಿದ್ದಾರೆ ಎಂದು ಮಾಹಿತಿ ನೀಡಿದರು. 'ಸಬ್ ಕಾ ಸಾತ್ ಸಬ್ ಕಾ ವಿಕಾಸ್' ದೂರದೃಷ್ಟಿಯೊಂದಿಗೆ ಕೇಂದ್ರ ಸರ್ಕಾರ ಕೆಲಸ ಮಾಡುತ್ತಿದೆ. ಅಲ್ಪ ಸಂಖ್ಯಾತ ಸಮುದಾಯಗಳಿಗೆ ಸೇರಿದ ಜನರಿಗೆ ೨೨ ಲಕ್ಷಕ್ಕೂ ಹೆಚ್ಚು ಮನೆಗಳು, ಪರಿಶಿಷ್ಟ ಪಂಗಡ ಮತ್ತು ಪರಿಶಿಷ್ಟ ಜಾತಿ ಸಮುದಾಯಗಳಿಗೆ ೨೪ ಲಕ್ಷ ಮನೆಗಳು

ಹಾಗೂ ಇತರೆ ಹಿಂದುಳಿದ ವರ್ಗಗಳ ಸಮುದಾಯಗಳಿಗೆ ೪೨ ಲಕ್ಷ ಮನೆಗಳನ್ನು ಮಂಜೂರು ಮಾಡಲಾಗಿದೆ. ಅಲ್ಲದೇ ಮಹಿಳೆಯರಿಗೆ ೯೦ ಲಕ್ಷ ಮನೆಗಳನ್ನು ಮಂಜೂರು ಮಾಡಲಾಗಿದೆ ಎಂದು ಸಚಿವ ತೋಖನ್ ಸಾಹು ತಿಳಿಸಿದರು.

********

ಭಾರತ ಇದೇ ೩೧ರಂದು ೨ನೇ ಭಾರತ-ಅರಬ್ ವಿದೇಶಾಂಗ ಸಚಿವರ ಸಭೆಯನ್ನು ಆಯೋಜಿಸಲಿದೆ. ಈ ಸಭೆಯ ಅಧ್ಯಕ್ಷತೆಯನ್ನು ಭಾರತ ಮತ್ತು ಯುಎಇ ವಹಿಸಲಿವೆ. ಅರಬ್ ಲೀಗ್ ಸದಸ್ಯ ರಾಷ್ಟ್ರಗಳ ವಿದೇಶಾಂಗ ಸಚಿವರು ಮತ್ತು ಪ್ರಧಾನ ಕಾರ್ಯದರ್ಶಿಗಳು ಈ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಹತ್ತು ವರ್ಷಗಳ ನಂತರ ಈ ಸಭೆ ನಡೆಯುತ್ತಿದೆ. ಮೊದಲ ಸಭೆ ೨೦೧೬ರಲ್ಲಿ ಬಹ್ರೇನ್‌ನಲ್ಲಿ ನಡೆದಿತ್ತು. ಮೊದಲ ಸಭೆಯಲ್ಲಿ ಆರ್ಥಿಕತೆ, ಇಂಧನ, ಶಿಕ್ಷಣ, ಮಾಧ್ಯಮ ಮತ್ತು ಸಂಸ್ಕೃತಿ ಕ್ಷೇತ್ರಗಳಿಗೆ ಆದ್ಯತೆ ನೀಡುವ ಕುರಿತು ಚರ್ಚಿಸಲಾಗಿತ್ತು. ಎರಡನೇ ಸಭೆಯಲ್ಲಿ ಅಸ್ತಿತ್ವದಲ್ಲಿರುವ ಸಹಕಾರವನ್ನು ಬಲಗೊಳಿಸುವ ಮತ್ತು ಪಾಲುದಾರಿಕೆಯನ್ನು ವಿಸ್ತರಿಸುವ ನಿರೀಕ್ಷೆಯಿದೆ. ಈ ಸಭೆಯಲ್ಲಿ ಎಲ್ಲ ೨೨ ಅರಬ್ ರಾಷ್ಟ್ರಗಳ ವಿದೇಶಾಂಗ ಸಚಿವರು, ಇತರೆ ಸಚಿವರು ಹಾಗೂ ಹಿರಿಯ ಅಧಿಕಾರಿಗಳು ಭಾಗವಹಿಸಲಿದ್ದಾರೆ.

********

೭೭ನೇ ಗಣರಾಜ್ಯೋತ್ಸವದ ಸಮಾರೋಪ ಸಮಾರಂಭವನ್ನು ಇಂದು ಸಂಜೆ ನವದೆಹಲಿಯ ವಿಜಯ್ ಚೌಕ್‌ನಲ್ಲಿ ನಡೆಸಲಾಗುತ್ತದೆ. ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಕೇಂದ್ರ ಸಚಿವರು ಭಾಗವಹಿಸಲಿದ್ದಾರೆ. ಇದು ಭಾರತೀಯ ಭೂ ಸೇನೆ, ನೌಕಾಪಡೆ, ಭಾರತೀಯ ವಾಯುಪಡೆ ಮತ್ತು ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳ ಬ್ಯಾಂಡ್‌ಗಳನ್ನು ಒಳಗೊಂಡಿರಲಿದೆ. ಈ ವರ್ಷ, ವಿಜಯ್ ಚೌಕ್‌ನ ಆಸನ ವ್ಯವಸ್ಥೆಗಳಿಗೆ ಭಾರತದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಪ್ರತಿಬಿಂಬಿಸುವ ಭಾರತೀಯ ಸಂಗೀತ ವಾದ್ಯಗಳ ಹೆಸರುಗಳನ್ನು ಇಡಲಾಗಿದೆ. ಸಮಾರೋಪ ಸಮಾರಂಭದ ಸಮಯದಲ್ಲಿ ಭಾರತದ ಶ್ರೀಮಂತ ಮಿಲಿಟರಿ ಪರಂಪರೆಯ ಶಕ್ತಿಯನ್ನು ಪ್ರದರ್ಶಿಸಲಾಗುತ್ತದೆ. ದೇಶದ ರಕ್ಷಣೆಗಾಗಿ ತಮ್ಮ ಪ್ರಾಣವನ್ನು ಮುಡಿಪಾಗಿಡುವ ಸಶಸ್ತ್ರ ಪಡೆಗಳ ಬಗ್ಗೆ ಇಡೀ ದೇಶ ಹೆಮ್ಮೆ ಪಡುತ್ತದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಈ ಸಮಾರಂಭವು ಸಶಸ್ತ್ರ ಪಡೆಗಳ ಶಿಸ್ತು, ಏಕತೆ ಮತ್ತು ಕಾಲಾತೀತ ನೀತಿಯನ್ನು ಪ್ರತಿಬಿಂಬಿಸುತ್ತದೆ. ಗೌರವಾನ್ವಿತ ಸಂಪ್ರದಾಯವಾಗಿರುವ ಈ ಸಮಾರಂಭವು ರಾಷ್ಟ್ರೀಯ ಹೆಮ್ಮೆ ಮತ್ತು ಮಿಲಿಟರಿ ಪರಂಪರೆಯ ಸಂಕೇತವಾಗಿ ನಿಂತಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ.

********

ಮಹಾರಾಷ್ಟ್ರ ಉಪಮುಖ್ಯಮಂತ್ರಿ, ಎನ್‌ಸಿಪಿ ನಾಯಕ ಅಜಿತ್ ಪವಾರ್, ಅವರ ಅಂತ್ಯಕ್ರಿಯೆಯು ಇಂದು ಬಾರಾಮತಿಯಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ನಡೆಯಿತು. ಇದಕ್ಕೂ ಮುನ್ನ ಕೇಂದ್ರ ಗೃಹ ಸಚಿವ ಅಮಿತ್ ಶಾ, ಕೇಂದ್ರ ರಸ್ತೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ, ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್, ಉಪಮುಖ್ಯಮಂತ್ರಿ ಏಕನಾಥ್ ಶಿಂಧೆ, ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್, ಬಿಜೆಪಿ ಅಧ್ಯಕ್ಷ ನಿತಿನ್ ನಬಿನ್, ಎನ್‌ಸಿಪಿ ಮುಖ್ಯಸ್ಥ ಶರದ್ ಪವಾರ್ ಸೇರಿದಂತೆ ಅನೇಕ ಗಣ್ಯರು ಅಂತಿಮ ನಮನ ಸಲ್ಲಿಸಿದರು. ಇನ್ನೊಂದೆಡೆ ಅಜಿತ್ ಪವಾರ್ ಹಾಗೂ ಇತರೆ ನಾಲ್ವರ ಸಾವಿನ ದುರಂತ ನಡೆದ ಬಾರಾಮತಿ ವಿಮಾನ ದುರಂತದಲ್ಲಿ ವಿಮಾನದ ಬ್ಲಾಕ್ ಬಾಕ್ಸ್ ವಶಪಡಿಸಿಕೊಳ್ಳಲಾಗಿದೆ ಎಂದು ನಾಗರಿಕ ವಿಮಾನಯಾನ ಸಚಿವಾಲಯ ತಿಳಿಸಿದೆ. ವಿಮಾನ ಅಪಘಾತದ ನಂತರ ಅಗತ್ಯವಿರುವ ಎಲ್ಲ ಪ್ರತಿಕ್ರಿಯೆ ಮತ್ತು ತನಿಖಾ ಕಾರ್ಯವಿಧಾನಗಳನ್ನು ಸಕ್ರಿಯಗೊಳಿಸಲಾಗಿದೆ. ದೆಹಲಿಯ ವಿಮಾನ ಅಪಘಾತ ತನಿಖಾ ದಳದ ಮೂವರು ಅಧಿಕಾರಿಗಳ ತಂಡ ಮತ್ತು ಡಿಜಿಸಿಎ ಮುಂಬೈ ಪ್ರಾದೇಶಿಕ ಕಚೇರಿಯ ಮೂವರು ಅಧಿಕಾರಿಗಳ ತಂಡ ಘಟನಾ ಸ್ಥಳಕ್ಕೆ ಭೇಟಿ ನೀಡಿದ್ದು, ತನಿಖೆ ನಡೆಸುತ್ತಿದ್ದಾರೆ ಎಂದು ಸಚಿವಾಲಯ ಮಾಹಿತಿ ನೀಡಿದೆ.

********

ಐರೋಪ್ಯ ಒಕ್ಕೂಟದ ಅಧ್ಯಕ್ಷರ ಇತ್ತೀಚಿನ ಭಾರತ ಭೇಟಿಯ ಸಂದರ್ಭದಲ್ಲಿ ಭಾರತೀಯ ರಿಸರ್ವ್ ಬ್ಯಾಂಕ್-ಆರ್‌ಬಿಐ, ಯೂರೋಪಿಯನ್ ಸೆಕ್ಯೂರಿಟೀಸ್ ಮತ್ತು ಮಾರ್ಕೆಟ್ಸ್ ಅಥಾರಿಟಿಯೊಂದಿಗೆ ತಿಳಿವಳಿಕೆ ಒಪ್ಪಂದಕ್ಕೆ ಸಹಿ ಹಾಕಿದೆ. ಕ್ಲಿಯರಿಂಗ್ ಕಾರ್ಪೋರೇಷನ್ ಆಫ್ ಇಂಡಿಯಾ ಲಿಮಿಟೆಡ್-ಸಿಸಿಐಎಲ್ ಹಾಗೂ ಆರ್‌ಬಿಐ ನಿಯಂತ್ರಿತ ಇತರೆ ಕೇಂದ್ರ ಸಂಸ್ಥೆಗಳನ್ನು ಯೂರೋಪಿಯನ್ ಸೆಕ್ಯೂರಿಟೀಸ್ ಮತ್ತು ಮಾರ್ಕೆಟ್ಸ್ ಅಥಾರಿಟಿಯಿಂದ ಔಪಚಾರಿಕವಾಗಿ ಗುರುತಿಸಲು ಅನುವು ಮಾಡಿಕೊಡುವುದು ಈ ಒಪ್ಪಂದದ ಪ್ರಾಥಮಿಕ ಉದ್ದೇಶವಾಗಿದೆ ಎಂದು ಹಣಕಾಸು ಸಚಿವಾಲಯ ತಿಳಿಸಿದೆ.

********

೬-ಜಿ ದೂರಸಂಪರ್ಕ ಸೇರಿದಂತೆ ಮುಂದಿನ ಪೀಳಿಗೆಯ ಡಿಜಿಟಲ್ ತಂತ್ರಜ್ಞಾನಗಳಲ್ಲಿ ಭದ್ರತೆ, ವಿಶ್ವಾಸ ಮತ್ತು ಸ್ಥಿತಿಸ್ಥಾಪಕ ಜಾಗತಿಕ ಪೂರೈಕೆ ಸರಪಳಿಗಳ ಮೇಲೆ ಕೇಂದ್ರೀಕರಿಸಿ ಕಾರ್ಯತಂತ್ರದ ಸಹಕಾರವನ್ನು ಬಲಪಡಿಸುವುದಕ್ಕೆ ತಮ್ಮ ಬದ್ಧತೆಯನ್ನು ಭಾರತ ಮತ್ತು ಐರೋಪ್ಯ ಒಕ್ಕೂಟ ಪುನರುಚ್ಚರಿಸಿವೆ. ಐರೋಪ್ಯ ಒಕ್ಕೂಟದ ಅಧ್ಯಕ್ಷರ ಇತ್ತೀಚಿನ ಭಾರತ ಭೇಟಿ ಸಂದರ್ಭದಲ್ಲಿ ಭಾರತ-ಐರೋಪಯ ಒಕ್ಕೂಟ ವ್ಯಾಪಾರ ಮತ್ತು ತಂತ್ರಜ್ಞಾನ ಮಂಡಳಿಯ ಅಡಿಯಲ್ಲಿ ಮುಂದುವರಿದ ಮತ್ತು ಉದಯೋನ್ಮುಖ ತಂತ್ರಜ್ಞಾನಗಳ ಹೆಚ್ಚುತ್ತಿರುವ ಪ್ರಾಮುಖ್ಯತೆ ಕುರಿತು ಎರಡೂ ಕಡೆಯವರು ಚರ್ಚಿಸಿದರು. ದೂರಸಂಪರ್ಕ, ಡಿಜಿಟಲ್ ಮೂಲಸೌಕರ್ಯ ಮತ್ತು ಜಾಗತಿಕ ಮಾನದಂಡಗಳ ಅಭಿವೃದ್ಧಿಯಂತಹ ಕ್ಷೇತ್ರಗಳಲ್ಲಿ ವರ್ಧಿತ ಸಹಯೋಗವನ್ನು ಮತ್ತಷ್ಟು ಬಲಪಡಿಸುವ ಕುರಿತು ಉಭಯ ಕಡೆಯವರು ತಮ್ಮ ಬದ್ಧತೆಯನ್ನು ಪುನರುಚ್ಚರಿಸಿದ್ದರು.

********

ಗುರು ರವಿದಾಸ್ ಜಯಂತಿಯ ಫೆಬ್ರವರಿ ೧೮ ಭಾನುವಾರದಂದು ಪ್ರಧಾನಿ ನರೇಂದ್ರ ಮೋದಿ ಅವರು, ಪಂಜಾಬ್‌ನ ಜಲಂದರ್‌ನ ಡೇರಾ ಸಚ್‌ಖಂಡ್ ಬಲ್ಲನ್‌ಗೆ ಭೇಟಿ ನೀಡಲಿದ್ದಾರೆ. ಅಂದು ಬೆಳಗ್ಗೆ ಸಂಸತ್ತಿನಲ್ಲಿ ಬಜೆಟ್ ಅಧಿವೇಶನದಲ್ಲಿ ಭಾಗವಹಿಸಿದ ನಂತರ ಪ್ರಧಾನಿ ನರೇಂದ್ರ ಮೋದಿಯವರು ಡೇರಾ ತಲುಪಲಿದ್ದಾರೆ ಎಂದು ಕೇಂದ್ರ ಸಚಿವ ರವನೀತ್ ಸಿಂಗ್ ಬಿಟ್ಟು ಮಾಹಿತಿ ನೀಡಿದ್ದಾರೆ.

********

ನವದೆಹಲಿಯಲ್ಲಿ ಆಧಾರ್ ಅಪ್ಲಿಕೇಶನ್ ಅನ್ನು ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವ ಜಿತಿನ್ ಪ್ರಸಾದ್ ಬಿಡುಗಡೆ ಮಾಡಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಆಧಾರ್ ಡಿಜಿಟಲ್ ನಾವೀನ್ಯತೆ ಮತ್ತು ಎಲ್ಲರನ್ನೂ ಒಳಗೊಂಡ ಆಡಳಿತ ಭಾರತದ ಪ್ರಬಲ ಜಾಗತಿಕ ಉದಾಹರಣೆಗಳಲ್ಲಿ ಒಂದಾಗಿದೆ ಎಂದು ಹೇಳಿದರು.

********

ವಡೋದರಾದ ಬಿಸಿಎ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಮಹಿಳೆಯರ ಪ್ರೀಮಿಯರ್ ಲೀಗ್-ಡಬ್ಲೂಪಿಎಲ್ ಟಿ-೨೦ ಕ್ರಿಕೆಟ್‌ನ ೧೮ನೇ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು-ಆರ್‌ಸಿಬಿ ಮತ್ತು ಯುಪಿ ವಾರಿಯರ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭ ಗಂಟೆ ೩೦ ನಿಮಿಷಕ್ಕೆ ಪ್ರಾರಂಭವಾಗಲಿದೆ.

****END****